ಜಿಲ್ಲಾಧಿಕಾರಿಗಳ ಕಾರ್ಯಾಲಯ,
ಧಾರವಾಡ–580001
**Deputy Commissioner Office,
Dharwad-580001
e-mail: deo.dharwad@gmail.com**

ಕರ್ನಾಟಕ ಸರ್ಕಾರ
**Government of karnataka**

ದೂರವಾಣಿ: 0836–2233840, 2233880,
(ಫ್ಯಾಕ್ಸ್) 0836–2747102,
**website:www.dharwad.nic,in**

---

ಕ್ರ.ಸಂ.ಸಿಬ್ಬಂದಿ–3/ಗ್ರಾಲೆನೇ/ವಹಿ–10/2019–20 ದಿನಾಂಕ 09–01–2020

## ಪ್ರ ಕ ಟ ಣೆ

ವಿಷಯ:– ಧಾರವಾಡ ಜಿಲ್ಲಾ ಕಂದಾಯ ಘಟಕದಲ್ಲಿ ಖಾಲಿ ಇರುವ ಗ್ರಾಮಲೆಕ್ಕಾಧಿಕಾರಿಗಳ ಹುದ್ದೆಗಳನ್ನು ನೇರ ನೇಮಕಾತಿಯಿಂದ ಮೆರಿಟ್ ಆಧಾರದ ಮೇಲೆ ಭರ್ತಿ ಮಾಡಲು ಆಯ್ಕೆ ಪಟ್ಟಿ ಪ್ರಕಟಿಸುವ ಕುರಿತು

ಉಲ್ಲೇಖ:– ಈ ಕಾರ್ಯಾಲಯದ ಸಮಸಂಖ್ಯೆ ಅಧಿಸೂಚನೆ ದಿ: 31–07–2019

ಧಾರವಾಡ ಜಿಲ್ಲಾ ಕಂದಾಯ ಘಟಕದಲ್ಲಿ ವಿವಿಧ ಕಾರಣಗಳಿಂದ ಖಾಲಿ ಇರುವ 22 ಗ್ರಾಮಲೆಕ್ಕಾಧಿಕಾರಿಗಳ ಹುದ್ದೆಗಳನ್ನು ನೇರ ನೇಮಕಾತಿಯಿಂದ ಮೆರಿಟ್ ಆಧಾರದ ಮೇಲೆ ಭರ್ತಿ ಮಾಡಲು ದಿನಾಂಕ 31–07–2019 ರಂದು ಅಧಿಸೂಚನೆ ಹೊರಡಿಸಿ ವೆಬ್‌ಸೈಟ್ http://dharwad-va.kar.nic.in ರಲ್ಲಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು. ಒಟ್ಟು ಸ್ವೀಕೃತವಾದ ಅರ್ಹ ಅರ್ಜಿಗಳಲ್ಲಿ 1:1 ಅನುಪಾತದಲ್ಲಿ ನೇರ ಮೀಸಲಾತಿ, ಸಮತಳ ಮೀಸಲಾತಿ ಮತ್ತು ಮೆರಿಟ್ ಆಧಾರದ ಮೇಲೆ ಆಯ್ಕೆ ಪಟ್ಟಿಯನ್ನು ತಯಾರಿಸಿ http://dharwad.nic.in ರಲ್ಲಿ ಪ್ರಕಟಿಸಲಾಗಿದೆ. ಆಯ್ಕೆ ಪಟ್ಟಿಯಲ್ಲಿರುವ ಅಭ್ಯರ್ಥಿಗಳು ದಿನಾಂಕ 16–01–2020 ರಂದು ಬೆಳಿಗ್ಗೆ 10–00 ಗಂಟೆಯಿಂದ ಸಂಜೆ 5–00 ಗಂಟೆಯೊಳಗೆ ಸಭಾ ಭವನ (ಹೊಸ ಕಟ್ಟಡ) ಜಿಲ್ಲಾಧಿಕಾರಿಗಳು, ಧಾರವಾಡ ಇವರ ಕಾರ್ಯಾಲಯಕ್ಕೆ ಹಾಜರಾಗಿ ಸಂಬಂಧಿಸಿದ ಎಲ್ಲಾ ಮೂಲ ದಾಖಲೆಗಳನ್ನು ಹಾಜರ ಪಡಿಸಲು ಸೂಚಿಸಿದೆ. ಅಭ್ಯರ್ಥಿಗಳು ಸದರಿ ದಿನಾಂಕದಂದು ಹಾಜರಾಗದೇ ಇದ್ದಲ್ಲಿ ಆಯ್ಕೆ ಪಟ್ಟಿಯಿಂದ ಕೈಬಿಡಲಾಗುವುದು ಮತ್ತು ನಿಯಮಾನುಸಾರ ನಂತರದ ಅರ್ಹ ಅಭ್ಯರ್ಥಿಯನ್ನು ಆಯ್ಕೆಗೆ ಪರಿಗಣಿಸಲಾಗುವುದು.

ಅಧ್ಯಕ್ಷರು,
ಗ್ರಾಮಲೆಕ್ಕಾಧಿಕಾರಿಗಳ ನೇರ ನೇಮಕಾತಿ
ಆಯ್ಕೆ ಪ್ರಾಧಿಕಾರ ಹಾಗೂ
ಜಿಲ್ಲಾಧಿಕಾರಿಗಳು, ಧಾರವಾಡ ಜಿಲ್ಲೆ, ಧಾರವಾಡ

ಪ್ರತಿಗಳು:

1. ಹಿರಿಯ ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಧಾರವಾಡ ಇವರಿಗೆ–
   2/–ಸದರಿ ಪ್ರಕಟಣೆಯನ್ನು ಸಾರ್ವಜನಿಕ ಸುದ್ದಿ ಅಂತಾ ಸ್ಥಳೀಯ ದಿನ ಪತ್ರಿಕೆಗಳಲ್ಲಿ ಪ್ರಕಟಿಸಲು ಕೋರಲಾಗಿದೆ.
2. ಜಿಲ್ಲೆಯ ಎಲ್ಲಾ ತಹಶೀಲ್ದಾರಗಳಿಗೆ
   2/– ಸದರ ಪ್ರಕಟಣೆಯನ್ನು ತಮ್ಮ ಕಾರ್ಯಾಲಯದ ನೋಟೀಸ ಬೋರ್ಡಿಗೆ ಪ್ರಕಟಿಸಿ, ಪ್ರಕಟಿಸಿದ ಬಗ್ಗೆ ವರದಿಯನ್ನು ಈ ಕಾರ್ಯಾಲಯಕ್ಕೆ ಸಲ್ಲಿಸುವುದು.